## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಕಡ್ಡಾಯ ಸೇವಾ ತರಬೇತಿಯ ಸ್ನಾತಕೋತ್ತರ/ಡಿಪ್ಲೊಮಾ ಪದವೀದರರಿಗೆ ಹಾಗೂ ಸೂಪರ್ ಸ್ಪೆಷಾಲಿಟಿ ಪದವೀದರರಿಗೆ ಮಾಸಿಕ ವೇತನ ಹೆಚ್ಚಳದ ಬಗ್ಗೆ.

<u>ಓದಲಾಗಿದೆ:</u>

1. ಸರ್ಕಾರಿ ಆದೇಶ ಸಂಖ್ಯೆ:ಆಕುಕ 143 ಹೆಚ್‌ಎಸ್‌ಹೆಚ್ 2012, ದಿನಾಂಕ:16.4.2012.
2. ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 57 ಶಾಸನ 2012, ದಿನಾಂಕ:6.8.2015.
3. ಕರ್ನಾಟಕ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶ ದಿನಾಂಕ:6.10.2015.
4. ಕರ್ನಾಟಕ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶ ದಿನಾಂಕ:28.4.2016.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ, ಸರ್ಕಾರಿ ಕೋಟಾದಲ್ಲಿ ಆಯ್ಕೆಗೊಂಡು ವೈದ್ಯಕೀಯ ವ್ಯಾಸಂಗವನ್ನು ಪೂರ್ಣಗೊಳಿಸಿದ ಎಂಬಿಬಿಎಸ್, ಸ್ನಾತಕೋತ್ತರ ಪದವಿ ಮತ್ತು ಸ್ನಾತಕೋತ್ತರ ಡಿಪ್ಲೊಮಾ ಪಡೆದ ಅಭ್ಯರ್ಥಿಗಳ ಸೇವೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಸ್ಪತ್ರೆ/ಕೇಂದ್ರಗಳಲ್ಲಿ ಬಳಸಿಕೊಳ್ಳಲು ಉದ್ದೇಶಿಸಿ, ಅಂತಹ ಅಭ್ಯರ್ಥಿಗಳಲ್ಲಿ ಎಂಬಿಬಿಎಸ್ ವೈದ್ಯರಿಗೆ ರೂ. 25,000/- ಹಾಗೂ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳಿಗೆ ರೂ. 35,000/- ಮತ್ತು ಸ್ನಾತಕೋತ್ತರ ಡಿಪ್ಲೊಮಾ ಪಡೆದ ಅಭ್ಯರ್ಥಿಗಳಿಗೆ ರೂ. 32,500/-ಗಳ ಮಾಸಿಕ ಸಂಚಿತ ಸಂಭಾವನೆಯನ್ನು ನಿಗದಿಪಡಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ 'ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012'(2015ರ ಕರ್ನಾಟಕ ಅಧಿನಿಯಮ ಸಂಖ್ಯೆ:26) ಅನ್ನು ಜಾರಿಗೆ ತರಲಾಗಿದೆ. ಸದರಿ ಅಧಿನಿಯಮದನ್ವಯ, ಎಂಬಿಬಿಎಸ್ ಪೂರ್ಣಗೊಳಿಸಿದ ಅಭ್ಯರ್ಥಿಗಳನ್ನು 1 ವರ್ಷ ಕಡ್ಡಾಯ ಗ್ರಾಮೀಣ ಸೇವೆಗೆ ನೇಮಕ ಮಾಡಿದಲ್ಲಿ ಅವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಒಬ್ಬ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯ ಒಟ್ಟು ವೇತನದಲ್ಲಿ ರೂ. 100/-ಗಳನ್ನು ಕಟಾಯಿಸಿ ವೇತನ ಪಾವತಿಸಬೇಕಾಗುತ್ತದೆ. ಸ್ನಾತಕೋತ್ತರ ಪದವಿ/ಡಿಪ್ಲೋಮಾ ಪೂರ್ಣಗೊಳಿಸಿದ ಅಭ್ಯರ್ಥಿಯನ್ನು ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡಿಸಿದಲ್ಲಿ ಅವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಜ್ಞ ವೈದ್ಯರಿಗೆ ಪಾವತಿಸುವ ಒಟ್ಟು ವೇತನದಲ್ಲಿ ರೂ. 100/-ಗಳನ್ನು ಕಟಾ ಎಸಿ ವೇತನ ಪಾವತಿಸಬೇಕಾಗುತ್ತದೆ ಹಾಗೂ ಸೂಪರ್ ಸ್ಪೆಷಾಲಿಟಿ ಪದವಿ ಪಡೆದ ಅಭ್ಯರ್ಥಿಗಳನ್ನು ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡಿಸಿದಲ್ಲಿ ಅವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಹಿರಿಯ ತಜ್ಞ ವೈದ್ಯರಿಗೆ ಪಾವತಿಸುವ ಒಟ್ಟು ವೇತನದಲ್ಲಿ ರೂ. 100/-ಗಳನ್ನು ಕಡಿತಗೊಳಿಸಿ ವೇತನ ಪಾವತಿಸಬೇಕಾಗುತ್ತದೆ.

'ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012'(2015ರ ಕರ್ನಾಟಕ ಅಧಿನಿಯಮ ಸಂಖ್ಯೆ:26)ರ ವಿರುದ್ಧ ಕೆಲವು ಅಭ್ಯರ್ಥಿಗಳು ಮಾನ್ಯ ನ್ಯಾಯಾಲಯದಲ್ಲಿ ದಾವೆ ಹೂಡಿದ ಕಾರಣ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿನ ತನ್ನ ಮಧ್ಯಂತರ ಆದೇಶದಲ್ಲಿ ಸದರಿ ಅಧಿನಿಯಮಕ್ಕೆ ತಡೆಯಾಜ್ಞೆ ನೀಡಿರುತ್ತದೆ.

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿ 'ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012'ರನ್ವಯ ಸ್ವ-ಇಚ್ಛೆಯಿಂದ ಕರ್ತವ್ಯ ನಿರ್ವಹಿಸಲು ಬರುವ ಅಭ್ಯರ್ಥಿಗಳನ್ನು ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡಿಸಿ, ಅವರಿಗೆ ಸದರಿ ಅಧಿನಿಯಮದನ್ವಯ ವೇತನ ಮತ್ತು ಇತರೆ ಭತ್ಯೆಗಳನ್ನು ಪಾವತಿಸಲು ಅವಕಾಶ ಕಲ್ಪಿಸಿರುತ್ತದೆ.

......2

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸ್ನಾತಕೋತ್ತರ/ಡಿಪ್ಲೋಮಾ ಪದವೀದರರಿಗೆ ಹಾಗೂ ಸೂಪರ್ ಸ್ಪೆಷಾಲಿಟಿ ಪದವೀದರರಿಗೆ ಪ್ರಸ್ತುತ ನೀಡುತ್ತಿರುವ ವೇತನ ಸ್ನಾತಕೋತ್ತರ/ಡಿಪ್ಲೋಮಾ ಹಾಗೂ ಸೂಪರ್ ಸ್ಪೆಷಾಲಿಟಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಮಾಸಿಕ ಶಿಷ್ಯ ವೇತನಕ್ಕಿಂತ ಕಡಿಮೆಯಿರುವುದನ್ನು ಮನಗಂಡ ಸರ್ಕಾರ ಅವರ ವೇತನವನ್ನು ಹೆಚ್ಚಿಸಲು ತೀರ್ಮಾನಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 544 ಎಚ್ಎಸ್ಎಚ್ 2012, ಬೆಂಗಳೂರು, ದಿನಾಂಕ:19.07.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಸ್ಪತ್ರೆ/ಕೇಂದ್ರಗಳಲ್ಲಿ ಕಡ್ಡಾಯ ಸೇವೆಗೆ ನೇಮಕವಾಗುವ ಸ್ನಾತಕೋತ್ತರ/ಡಿಪ್ಲೋಮಾ ಪದವೀದರರಿಗೆ ಹಾಗೂ ಸೂಪರ್ ಸ್ಪೆಷಾಲಿಟಿ ಪದವೀದರರಿಗೆ ಕ್ರಮವಾಗಿ ರೂ. 45,000/-(ನಲವತ್ತೈದು ಸಾವಿರ ರೂಪಾಯಿಗಳು ಮಾತ್ರ) ಮತ್ತು ರೂ. 55,000/-(ಐವತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳ ಮಾಸಿಕ ಸಂಭಾವನೆಯನ್ನು ನಿಗದಿಪಡಿಸಿದೆ.

**ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 506 ವೆಚ್ಚ-5/2016, ದಿನಾಂಕ:28.06.2016ರಲ್ಲಿನ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/7/16

(ಟಿ.ಎನ್.ನರಸಿಂಹರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
2(ಸೇವೆಗಳು)
19/7

<u>ಇವರಿಗೆ:</u>

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

<u>ಪ್ರತಿ:</u>

1. ಮಹಾಲೇಖಪಾಲಕರು(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್‌ವೃತ್ತ, ಬೆಂಗಳೂರು.
7. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್‌ವೃತ್ತ, ಬೆಂಗಳೂರು.
8. ಅಭಿಯಾನ ನಿರ್ದೇಶಕರು, ಎನ್.ಆರ್.ಹೆಚ್.ಎಂ., ಆಕುಕ ಸೇವೆಗಳು, ಆನಂದರಾವ್‌ವೃತ್ತ, ಬೆಂಗಳೂರು.
9. ನಿರ್ದೇಶಕರು, ವೈದ್ಯಕೀಯ ಶಿಕ್ಷಣ,-ಬೆಂಗಳೂರು.
10. ಯೋಜನಾ ಆಡಳತಾಧಿಕಾರಿ, ಕೆ.ಹೆಚ್.ಎಸ್.ಆರ್.ಡಿ.ಪಿ., ಶೇಷಾದ್ರಿ ರಸ್ತೆ, ಬೆಂಗಳೂರು.
11. ನಿಬಂಧಕರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಜಯನಗರ, ಬೆಂಗಳೂರು.
12. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
13. ಎಲ್ಲಾ ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆಕುಕ ಇಲಾಖೆ ಇವರ ಆಪ್ತ ಶಾಖೆ, ವಿಕಾಸಸೌಧ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ-1, ಆಕುಕ ಇಲಾಖೆ ಇವರ ಆಪ್ತ ಶಾಖೆ, ವಿಕಾಸಸೌಧ, ಬೆಂಗಳೂರು.
16. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.